**ಕರ್ನಾಟಕ ವಿಧಾನಸಭೆ**
**ಹದಿನಾರನೇ ವಿಧಾನಸಭೆ**
**ಮೂರನೇ ಅಧಿವೇಶನ**

# ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2024

**(2024ರ ವಿಧಾನಸಭೆಯ ವಿಧೇಯಕ ಸಂಖ್ಯೆ-2)**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ನ್ನು (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2024 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. 160ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ (1993ರ ಕರ್ನಾಟಕ ಅಧಿನಿಯಮ 14) 160ನೇ ಪ್ರಕರಣದಲ್ಲಿನ ಮೊದಲನೇ ಪರಂತುಕದಲ್ಲಿ,-

(i) "ಮತ್ತು ಕೊಡಗು" ಎಂಬ ಪದಗಳನ್ನು ಬಿಟ್ಟುಬಿಡತಕ್ಕದ್ದು.

(ii) ಕೊನೆಯಲ್ಲಿ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"ಕೊಡಗು ಜಿಲ್ಲೆಯ ಸಂದರ್ಭದಲ್ಲಿ, ಗ್ರಾಮೀಣ ಜನಸಂಖ್ಯೆಯ ಪ್ರತಿ ಹದಿನೆಂಟು ಸಾವಿರ ಅಥವಾ ಅದರ ಭಾಗಕ್ಕೆ ಒಬ್ಬ ಸದಸ್ಯನಿರತಕ್ಕದ್ದು."

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಕೊಡಗು ಜಿಲ್ಲೆಯು ಸಂಪೂರ್ಣವಾಗಿ ಮಲೆನಾಡಿನಂತೆ ಕಡಿಮೆ ಜನಸಾಂದ್ರತೆ ಹೊಂದಿರುವ ಜನಸಂಖ್ಯೆಯು ಚದುರಿದ ಗುಡ್ಡಗಾಡು ಪ್ರದೇಶವಾಗಿದೆ. ಕೆಲವು ಸಂದರ್ಭಗಳಲ್ಲಿ ಜಿಲ್ಲಾಪಂಚಾಯಿತಿ ಕ್ಷೇತ್ರವು ಭೌಗೋಳಿಕವಾಗಿ 100 ಕಿ.ಮೀ.ವರೆಗೆ ವ್ಯಾಪಿಸಿದೆ. ಭೌಗೋಳಿಕವಾಗಿ ಜಿಲ್ಲಾ ಪಂಚಾಯಿತಿ ಕ್ಷೇತ್ರದ ಭೂ ವಿಸ್ತೀರ್ಣವು ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಆಡಳಿತದ ಮೇಲೆ ಋಣಾತ್ಮಕ ಪರಿಣಾಮ ಬೀರುತ್ತಿದೆ.

ಕರ್ನಾಟಕ ಪಂಚಾಯತ್ ರಾಜ್ ಗಡಿನಿರ್ಧರಣಾ ಆಯೋಗವು ಕೊಡಗಿನ ಸಾರ್ವಜನಿಕರ ಮನವಿಯ ಮೇರೆಗೆ ಅಗತ್ಯ ತಿದ್ದುಪಡಿಯನ್ನು ಶಿಫಾರಸ್ಸು ಮಾಡಿದೆ. ಆದ್ದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14)ನ್ನು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಲಾಗಿ .

ಆದ್ದರಿಂದ ಈ ವಿಧೇಯಕ

.

**ಆರ್ಥಿಕ ಜ್ಞಾಪನ ಪತ್ರ**

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಹೆಚ್ಚಿನ ಆರ್ಥಿಕ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಪ್ರಿಯಾಂಕ ಖರ್ಗೆ**
ಗ್ರಾಮೀಣಾಭಿವೃದ್ಧಿ, ಪಂಚಾಯತ್
ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ
ಮತ್ತು ಜೈವಿಕ ತಂತ್ರಜ್ಞಾನ ಮಂತ್ರಿ

**ಎಂ.ಕೆ. ವಿಶಾಲಾಕ್ಷಿ**
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

## ಅನುಬಂಧ

## ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993

## (1993ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ರ ಉದ್ಧೃತಭಾಗ

**X X XX XX**

**160. ಚುನಾಯಿತ ಸದಸ್ಯರು.-** ಜಿಲ್ಲಾ ಪಂಚಾಯತಿಯ ಚುನಾಯಿತ ಸದಸ್ಯರಲ್ಲಿ ಜಿಲ್ಲೆಯ ತಾಲ್ಲೂಕುಗಳಿಂದ ಚುನಾಯಿತರಾದ ಇಪ್ಪತ್ತಕ್ಕಿಂತಲೂ ಕಡಿಮೆಯಲ್ಲದಂತೆ ವ್ಯಕ್ತಿಗಳಿರತಕ್ಕದ್ದು, ಪ್ರತಿಯೊಂದು ತಾಲ್ಲೂಕಿನಿಂದ ಚುನಾಯಿತರಾಗತಕ್ಕ ಸದಸ್ಯರ ಸಂಖ್ಯೆಯನ್ನು ಮೂವತ್ತೈದು ಸಾವಿರ ಮತ್ತು ನಲವತ್ತೈದು ಸಾವಿರದ ಜನಸಂಖ್ಯೆಯ ನಡುವಣ ಪ್ರತಿಯೊಂದು ಜನಸಂಖ್ಯೆಗೆ ಅಥವಾ ಅದರ ಭಾಗಕ್ಕೆ ಒಬ್ಬ ಸದಸ್ಯನಂತೆ ಸರ್ಕಾರದಿಂದ ನಿಗದಿಪಡಿಸಲಾಗಿದೆ:

ಪರಂತು, ಚಿಕ್ಕಮಗಳೂರು (ತರೀಕೆರೆ, ಕಡೂರು, ಅಜ್ಜಂಪುರ ತಾಲ್ಲೂಕುಗಳನ್ನು ಹೊರತುಪಡಿಸಿ), ಉತ್ತರ ಕನ್ನಡ ಮತ್ತು ಕೊಡಗು ಜಿಲ್ಲೆಗಳ ಸಂದರ್ಭದಲ್ಲಿ ಪ್ರತಿ ಹದಿನೆಂಟು ಸಾವಿರದಿಂದ ಇಪ್ಪತ್ತೈದು ಸಾವಿರದ ನಡುವಣ ಗ್ರಾಮೀಣ ಜನಸಂಖ್ಯೆಗೆ ಅಥವಾ ಅದರ ಭಾಗಕ್ಕೆ ಒಬ್ಬ ಸದಸ್ಯನಿರತಕ್ಕದ್ದು.

ಮತ್ತು ಪರಂತು, ಏಳು ಲಕ್ಷಕ್ಕಿಂತ ಹೆಚ್ಚಿನ ಆದರೆ ಒಂಬತ್ತು ಲಕ್ಷದ ಐವತ್ತು ಸಾವಿರವನ್ನು ಮೀರಿರದ ಗ್ರಾಮೀಣ ಜನಸಂಖ್ಯೆಯನ್ನು ಹೊಂದಿರುವ ಜಿಲ್ಲೆಯ ಸಂದರ್ಭದಲ್ಲಿ ಇಪ್ಪತ್ತೆಂಟು ಚುನಾಯಿತ ಸದಸ್ಯರಿರತಕ್ಕದ್ದು.

**X X XX XX**

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ, ಬೆಂಗಳೂರು, ಪಿ7, ಕಾಸೂ 879, ಪ್ರತಿಗಳು 500, 13ನೇ ಫೆಬ್ರವರಿ 2023

**KARNATAKA LEGISLATIVE ASSEMBLY**
**SIXTEENTH LEGISLATIVE ASSEMBLY**
**THIRD SESSION**

# THE KARNATAKA GRAM SWARAJ AND PANCHAYAT RAJ (AMENDMENT) BILL, 2024

**(LA Bill No. 2 of 2024)**

A Bill further to amend the Karnataka Gram Swaraj and Panchayat Raj Act, 1993 (Karnataka Act 14 of 1993).

Whereas, it is expedient further to amend the Karnataka Gram Swaraj and Panchayat Raj Act, 1993 (Karnataka Act 14 of 1993) for the purposes hereinafter appearing;

Be it enacted by the Karnataka State Legislature in the seventy fifth year of the Republic of India, as follows:-

**1. Short title and commencement.-** (1) This Act may be called the Karnataka Gram Swaraj and Panchayat Raj (Amendment) Act, 2024.

(2) It shall come into force at once.

**2. Amendment of section 160.-** In the Karnataka Gram Swaraj and Panchayat Raj Act, 1993 (Karnataka Act 14 of 1993) in section 160, in the first proviso,-

(i) the words “and Kodagu” shall be omitted; and

(ii) at the end the following shall be inserted, namely:-

“and in case of Kodagu district, there shall be one member for every eighteen thousand or part thereof of rural population.”

## STATEMENT OF OBJECTS AND REASONS

Kodagu District is totally like Malnad district which consists of hilly areas with scattered population having low density. In some cases the geographical spread of the zilla panchayat constituency is nearly 100 K.M. The geographical expansion of territorial constituency of zilla panchayat has a negative effect on the development programmes and administration.

The Karnataka Panchayat Raj Delimitation Commission, at the request of the public from Kodagu has recommended to bring necessary amendment Hence It considered necessary to amend the Karnataka Gram Swaraj Panchayath Raj Act, 1993 (Karnataka Act 14 of 1993).

Hence the Bill.

## FINANCIAL MEMORANDUM

There is no extra expenditure involved in the proposed legislative measure.

**PRIYANK KHARGE**
Minister for Rural Development and
Panchayat Raj and Informantion Technology
and Bio Technology

**M.K. VISHALAKSHI**
Secretary
Karnataka Legislative Assembly

## ANNEXURE

**EXTRACT FROM THE KARNATAKA GRAM SWARAJ AND PANCHAYAT RAJ ACT, 1993 (KARNATAKA ACT 14 OF 1993).**

**XX XX XX**

**160. Elected members.-** The elected members of the Zilla Panchayat shall consist of not less than twenty five members elected from the Taluks in the district, the number of members to be elected from each Taluk being fixed by the Government in accordance with the scale of one member for every population between thirty five thousand and forty-five thousand or part thereof of the population : 117

Provided that, in case of Chikkamagalur (excluding Tarikere, Kaduru, Ajjampura Taluks) Uttara Kannada and Kodagu Districts it shall be one member for every rural population between eighteen thousand to twenty five thousand or part thereof

Provided further that, in case of a district having rural population of more than seven lakhs but not more than nine lakhs fifty thousand there shall be twenty eight elected members.

**XX XX XX**

Govt. Press, Vikasa Soudha, Bengaluru, 13th Feb, 2024, P7, W.D. 879, Copies 500